ಸದನವು ಮತ್ತೆ ರಾತ್ರಿ 7 ಗಂಟೆ 28 ನಿಮಿಷಕ್ಕೆ ಪ್ರಾರಂಭವಾದಾಗ ಸಭಾಧ್ಯಕ್ಷರ ಪೀಠದಲ್ಲಿ ಅಧ್ಯಕ್ಷರು (ಶ್ರೀ ಕೃಷ್ಣರವರು) ಉಪಸ್ಥಿತರಿದ್ದರು.

5. ಪ್ರಕಟಣೆ

ಅಧ್ಯಕ್ಷರು : ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಬಂದಿರುವ ಸಂದೇಶದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮ 118ರ ಮೇರೆಗೆ ವಿಧಾನ ಪರಿಷತ್ 2006ನೇ ಸಾಲಿನ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕವನ್ನು ಈ ದಿನ ದಿನಾಂಕ 30ನೇ ಜೂನ್ 2006ರಂದು ಯಾವುದೇ ತಿದ್ದುಪಡಿ ಇಲ್ಲದೆ ಅಂಗೀಕರಿಸಲಾಗಿದೆ ಎಂದು ತಿಳಿಸಿರುತ್ತಾರೆ.

ಈಗ ಸದನವನ್ನು 3ನೇ ತಾರೀಖು ಸೋಮವಾರ ಬೆಳಿಗ್ಗೆ 11 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ರಾತ್ರಿ 7 ಗಂಟೆ 29 ನಿಮಿಷಕ್ಕೆ ಮುಂದೂಡಲ್ಪಟ್ಟು ಪುನಃ ದಿನಾಂಕ 3ನೇ ಜುಲೈ 2006 ರಂದು ಬೆಳಿಗ್ಗೆ 11.00 ಗಂಟೆಗೆ ಸೇರಲು ನಿಶ್ಚಯಿಸಿತು).

ಕರ್ನಾಟಕ ವಿಧಾನಸಭೆ

ಹನ್ನೆರಡನೇ ವಿಧಾನಸಭೆ

ಮೂರನೇ ಅಧಿವೇಶನ

(ಮುಂದುವರೆದ ಉಪವೇಶನಗಳು)

ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕ, 2006

[2006ರ ವಿಧಾನಸಭೆಯ ವಿಧೇಯಕ ಸಂಖ್ಯೆ 15]

ರಾಜ್ಯ ಸರ್ಕಾರ ಮತ್ತು ವೃತ್ತಿ ಶಿಕ್ಷಣ ಕೋರ್ಸುಗಳ ಶಿಕ್ಷಣ ನೀಡುತ್ತಿರುವ ಅನುದಾನಿತವಲ್ಲದ ಖಾಸಗಿ ಶಿಕ್ಷಣ ಸಂಸ್ಥೆಗಳ ನಡುವೆ ಮಾಡಿಕೊಳ್ಳಲಾದ ಸಮ್ಮತಾಭಿಪ್ರಾಯ ಒಪ್ಪಂದಕ್ಕೆ ಮಾನ್ಯತೆ ನೀಡುವುದಕ್ಕಾಗಿ ಮತ್ತು 2005(6) ಎಸ್‌ಸಿಸಿ 537ರಲ್ಲಿ ವರದಿಯಾದ ಪಿ.ಎ. ಇನಾಂದಾರ್ ಮತ್ತು ಇತರರು –ವಿರುದ್ಧ– ಮಹಾರಾಷ್ಟ್ರ ರಾಜ್ಯ –ಪ್ರಕರಣದಲ್ಲಿ ಸರ್ವೋಚ್ಚ ನ್ಯಾಯಾಲಯವು ನೀಡಿದ ತೀರ್ಪಿನಲ್ಲಿ ಉಪಬಂಧಿಸಲಾದಂಥ ಇತರ ವಿಷಯಗಳಿಗೆ ಉಪಬಂಧಕಲ್ಪಿಸುವುದಕ್ಕಾಗಿ ಒಂದು ವಿಧೇಯಕ.

ರಾಜ್ಯ ಸರ್ಕಾರವು, ಕರ್ನಾಟಕ ನಿವಾಸಿ ವಿದ್ಯಾರ್ಥಿಗಳ ಮತ್ತು ಶೈಕ್ಷಣಿಕವಾಗಿ ಮತ್ತು ಸಾಮಾಜಿಕವಾಗಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಹಿತರಕ್ಷಣೆಗಾಗಿ ಖಾಸಗಿ ಅನುದಾನಿತವಲ್ಲದ ವೃತ್ತಿ ಶಿಕ್ಷಣ ಸಂಸ್ಥೆಗಳೊಡನೆ ಸಮ್ಮತಾಭಿಪ್ರಾಯದ ಒಪ್ಪಂದ ಮಾಡಿಕೊಂಡಿರುವುದರಿಂದ ಮತ್ತು